EENADU INDIA
ನಮ್ಮ ಕನ್ನಡ

# ಹುಬ್ಬಳ್ಳಿಯಲ್ಲಿ ಏಕೀಕೃತ ಕೃಷಿ ಮಾರುಕಟ್ಟೆ ಬಗ್ಗೆ ರಾಷ್ಟ್ರಮಟ್ಟದ ಕಾರ್ಯಾಗಾರ

Published 09-Jul-2015 21:54 IST | Updated 22:00 IST




**ಹುಬ್ಬಳ್ಳಿ : ನಗರದ ಖಾಸಗಿ ಹೊಟೇಲ್‌ನಲ್ಲಿ ಏಕೀಕೃತ ಕೃಷಿ ಮಾರುಕಟ್ಟೆಗಳು "ಕರ್ನಾಟಕ ಮಾದರಿ" ರಾಷ್ಟ್ರ ಮಟ್ಟದ ಕಾರ್ಯಾಗಾರ ಆರಂಭವಾಗಿದೆ.**

ಈ ಕಾರ್ಯಗಾರದಲ್ಲಿ ಮಾತನಾಡಿದ ಕೇಂದ್ರ ಕೃಷಿ ಸಚಿವ ರಾಧಾಮೋಹನ ಸಿಂಗ್ ಡಿಜಿಟಲ್ ಇಂಡಿಯಾ ಕೇಂದ್ರ ಸರ್ಕಾರದ ಕನಸಾಗಿದ್ದು, ಕರ್ನಾಟಕ ಇ-ಟ್ರೇಡಿಂಗ್ ಮೂಲಕ ಈ ಕನಸನ್ನು ನನಸು ಮಾಡಿದೆ. ಈ ಮೂಲಕ ಕರ್ನಾಟಕ ಅಗ್ರಶ್ರೇಣಿಯಲ್ಲಿದೆ. ನಾವು ಇದನ್ನು ಕಲಿಯಲು ಬಂದಿದ್ದೇವೆ. ಪಂಜಾಬ್, ಹರಿಯಾಣ ಸೇರಿದಂತೆ ಹಲವು ರಾಜ್ಯಗಳು ಮಣ್ಣು ಸತ್ತು ಹೋಗಿದೆ. ಸತ್ತ ಮಣ್ಣಿಗೆ ಜೀವ ತುಂಬಬೇಕಿದೆ. ಇದಕ್ಕಾಗಿ

ಕೇಂದ್ರ ಸರ್ಕಾರ ಸಂಚಾರಿ ಮಣ್ಣು ಪರೀಕ್ಷಾ ಪ್ರಯೋಗಾಲಯ ಜಾರಿಗೆ ತಂದಿದೆ ಎಂದರು.

ಪ್ರಸಕ್ತ ಸಾಲಿನಲ್ಲಿ 585 ರಾಷ್ಟ್ರೀಯ ಕೃಷಿ ಮಾರುಕಟ್ಟೆ ಸ್ಥಾಪನೆ ಮಾಡಲಾಗುವುದು. ದೇಶದ ಎಲ್ಲ ಎ.ಪಿ.ಎಮ್.ಸಿ ಯಲ್ಲಿ ಇ-ಟ್ರೇಡಿಂಗ್ ಜಾರಿಗೆ ಚಿಂತನೆ ನಡೆಸಲಾಗಿದೆ ಎಂದರು.

ಈ ಕಾರ್ಯಗಾರದಲ್ಲಿ ಕೇಂದ್ರ ಕೃಷಿ ಸಚಿವ ರಾಧಾಮೋಹನ ಸಿಂಗ್ ಸೇರಿದಂತೆ 11 ರಾಜ್ಯಗಳ ಕೃಷಿ ಸಚಿವರು, 23 ರಾಜ್ಯಗಳ ಕೃಷಿ ಇಲಾಖೆ ಅಧಿಕಾರಿಗಳು, ಮೂರು ಕೇಂದ್ರಾಡಳಿತ ಪ್ರದೇಶಗಳ ಕಾರ್ಯದರ್ಶಿಗಳು, ರಾಜ್ಯ ಕೃಷಿ ಸಚಿವ ಕೃಷ್ಣಬೈರೇಗೌಡ, ತೋಟಗಾರಿಕೆ ಸಚಿವ ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ಮಾಜಿ ಸಿ.ಎಂ ಜಗದೀಶ್ ಶೆಟ್ಟರ್, ಪ್ರಹ್ಲಾದ್ ಜೋಶಿ ಭಾಗವಹಿಸಿದ್ದಾರೆ.